**<u>ಅಸಲು ದಾವಾ ಸಂಖ್ಯೆ: 47/2022</u>** **ಡಿ.ಡಬ್ಲ್ಯೂ:-2**

ದಿನಾಂಕಃ **02-04-2026** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಖ್ಯ ವಿಚಾರಣೆ:- ಪ್ರತಿವಾದಿ ಪರ ವಕೀಲರಿಂದ:-</u>

ನಾನು ಈ ದಾವೆಯಲ್ಲಿ 1 ನೇ ಪ್ರತಿವಾದಿಯಾಗಿದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದಾಗಿದೆ.

<u>ಪಾಟೀ ಸವಾಲುಃ ವಾದಿಯ ಪರ ವಕೀಲರಿಂದಃ</u>

2 ರಿಂದ 5 ನೇ ಪ್ರತಿವಾದಿಗಳು ನನ್ನ ಮಕ್ಕಳು. ಪ್ರತಿವಾದಿ 5(ಎ) ನನ್ನ ಸೊಸೆ. ಪ್ರತಿವಾದಿ 5(ಬಿ) ಮತ್ತು (ಸಿ) ನನ್ನ ಮೊಮಕ್ಕಳು. ರಾಮಪ್ಪ ನನಗೆ ಮಾವರಾಗಬೇಕು. ರಾಮಪ್ಪನ ಮಗಳನ್ನು ನಾನು ಮದುವೆಯಾಗಿರುತ್ತೇನೆ. ಕಾಮವ್ವ ಯಾರು ಎಂದು ನನಗೆ ಗೊತ್ತಿಲ್ಲ. 1968 ನೇ ಸಾಲಿನಲ್ಲಿ ನೀವು ಸೊರಟೂರಿನಲ್ಲಿ ವಾಸವಾಗಿದ್ದೀರಿ ಎಂದರೆ ಸಾಕ್ಷಿಯು ನಾನು ಹೊಸಕಟ್ಟೆ ಗ್ರಾಮದಲ್ಲಿ ವಾಸವಾಗಿದ್ದೆ ಆದರೆ ಆಗಾಗ್ಗೆ ಸೊರಟೂರು ಗ್ರಾಮಕ್ಕೆ ಹೋಗಿ ಬರುತ್ತಿದ್ದೆನು ಎಂದು ನುಡಿಯುತ್ತಾರೆ. ನಿಪಿ-2 ರಲ್ಲಿರುವ ರಾಮಪ್ಪರ ಸಹಿ ನನ್ನ ಮಾವನವರದ್ದು.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶಕೋರಿದ್ದು ನೀಡಿ ಮುಂದೂಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
**ಜೆ.ಎಂ.ಎಫ್.ಸಿ., ಹೊನ್ನಾಳಿ.**